# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 596
ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 21-02-2022.
ಉತ್ತರಿಸುವ ಸಚಿವರು : ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಯಾದಗಿರಿಯಲ್ಲಿ ಸ್ವತಂತ್ರ ಹೋರಾಟಗಾರ ಶ್ರೀ ಕೋಲ್ಲೂರು ಮಲ್ಲಪ್ಪನವರ ಸ್ಮಾರಕ ಸ್ಮರಣಾರ್ಥ ಸ್ಮಾರಕ ನಿರ್ಮಿಸಲು ರೂ.200.00ಲಕ್ಷಗಳನ್ನು ಮೀಸಲಿಡಲಾಗಿದ್ದು, ಸ್ಮಾರಕ ನಿರ್ಮಿಸುವ ಯೋಜನೆ ಯಾವ ಹಂತದಲ್ಲಿದೆ; (ವಿವರ ನೀಡುವುದು) | ಯಾದಗಿರಿ (ಬಿ) ಗ್ರಾಮದ ಸರ್ವೆ ನಂ.248/2ಎ ರಲ್ಲಿಯ ಸಾರ್ವಜನಿಕ ಉಪಯೋಗಕ್ಕಾಗಿ ಮೀಸಲಿಟ್ಟ 365 ಚದರ ಮೀಟರ್ (3925 ಚದರ ಅಡಿ) ಅಳತೆಯ ನಿವೇಶನವನ್ನು ದಿ\|\|ಕೊಲ್ಲೂರು ಮಲ್ಲಪ್ಪನವರ ಸ್ಮಾರಕ ಮತ್ತು ಭವನ ನಿರ್ಮಾಣಕ್ಕಾಗಿ ಜಾಗವನ್ನು ಮಂಜೂರು ಮಾಡುವಂತೆ ಕೋರಿ, ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಯಾದಗಿರಿ ಜಿಲ್ಲೆ ಇವರು ಪೌರಾಯುಕ್ತರು ನಗರಸಭೆ ಯಾದಗಿರಿ ಇವರಿಗೆ ಪತ್ರ ಬರೆಯಲಾಗ್ಗಿರುತ್ತದೆ. ಆದರೆ, ಯಾವ ಮಾಹಿತಿಯು ಸ್ವೀಕೃತವಾಗಿರದ ಕಾರಣ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿರುವುದಿಲ್ಲ. |
| ಆ) | ಶ್ರೀ ಕೋಲ್ಲೂರು ಮಲ್ಲಪ್ಪನವರ ಸ್ಮಾರಕವನ್ನು ಯಾವ ಸ್ಥಳದಲ್ಲಿ ನಿರ್ಮಿಸಲಾಗುವುದು; (ವಿವರ ನೀಡುವುದು) | ಯಾದಗಿರಿ (ಬಿ) ಸರ್ವೆ ನಂ.248/2ಎ ರಲ್ಲಿಯ ಸಾರ್ವಜನಿಕ ಉಪಯೋಗಕ್ಕಾಗಿ ಮೀಸಲಿಟ್ಟ 365 ಚದರ ಮೀಟರ್(3925 ಚದರ ಅಡಿ) ಅಳತೆ ನಿವೇಶನವನ್ನು ನಗರಸಭೆಯಿಂದ ಮಂಜೂರು ಮಾಡಲು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಯಾದಗಿರಿ ಜಿಲ್ಲೆ ಇವರು ಪೌರಾಯುಕ್ತರು ನಗರಸಭೆ ಯಾದಗಿರಿ ಇವರಿಗೆ ಪತ್ರ ಬರೆಯಲಾಗಿರುತ್ತದೆ. ಆದರೆ, ಇದುವರೆಗೂ ಜಾಗದ ಬಗ್ಗೆ ಮಾಹಿತಿಯು ಸ್ವೀಕೃತಗೊಂಡಿರುವುದಿಲ್ಲವಾದ್ದರಿಂದ, ಸ್ಥಳದ ಬಗ್ಗೆ ಅಂತಿಮ ತೀರ್ಮಾನವಾಗಿರುವುದಿಲ್ಲ. |
| ಇ) | ಸ್ಮಾರಕ ನಿರ್ಮಿಸಲು ಅಂದಾಜು ಪಟ್ಟಿಯನ್ನು ಸಿದ್ಧಪಡಿಸಲಾಗಿದೆಯೆ; ಸ್ಮಾರಕ ನಿರ್ಮಾಣ ಕಾರ್ಯವನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು) | ಉದ್ಭವಿಸುವುದಿಲ್ಲ. |

ಸಂಖ್ಯೆ: ಕಸಂವಾ 08 ಕವಿಸ 2022

(ವಿ. ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು